ಸುವರ್ಣ ಕರ್ನಾಟಕ ಪ್ರಶಸ್ತಿ ಪುರಸ್ಕೃತ
SAMYUKTA KARNATAKA
# ಸಂಯುಕ್ತ ಕರ್ನಾಟಕ
ಕನ್ನಡಿಗರ ಸಾಕ್ಷಿಪ್ರಜ್ಞೆ
ಶತಕದತ್ತ ಓಟ... ತೊಂಬತ್ತರ ನೋಟ

# 'ಅಮೂರ್ತ' ಪುಸ್ತಕ ಬಿಡುಗಡೆ

**ಧಾರವಾಡ:** ಉಪನ್ಯಾಸಗಳು, ಸಮ್ಮೇಳನಗಳು ಕಲಿಕೆ ಮತ್ತು ಸಂಶೋಧನೆಯಲ್ಲಿ ಮಹತ್ವದ ಪಾತ್ರ ವಹಿಸುತ್ತವೆ ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹೇಳಿದರು.

ಕರ್ನಾಟಕ ವಿಶ್ವವಿದ್ಯಾಲಯ, ಗಣಿತ ವಿಭಾಗ, ಪಾವಟೆ ಇನ್ಸ್‌ಟಿಟ್ಯೂಟ್ ಆಫ್ ಮ್ಯಾಥ್ಮೆಟಿಕಲ್ ಸಾಯಿನ್ಸಸ್ ಹಾಗೂ ಪ್ರಾದೇಶಿಕ ವಿಜ್ಞಾನ ಕೇಂದ್ರದ ಸಹಯೋಗದಲ್ಲಿ ಶುಕ್ರವಾರ ಗಣಿತದ ವಿಶ್ಲೇಷಣೆ ಮತ್ತು ಅನ್ವಯಗಳ ಕುರಿತ ಅಂತಾರಾಷ್ಟ್ರೀಯ ಸಮ್ಮೇಳನ ಉದ್ಘಾಟಿಸಿ ಮಾತನಾಡಿದರು. ಯುವ ಗಣಿತ ಶಾಸ್ತ್ರಜ್ಞರನ್ನು ಹುಟ್ಟು ಹಾಕುವುದು ವಿಶ್ವವಿದ್ಯಾಲಯಗಳ ಮುಖ್ಯ ಗುರಿಯಾಗಿದೆ. ಡಾ. ಡಿ.ಸಿ. ಪಾವಟೆಯವರು ನಮ್ಮ ಕನ್ನಡ ನಾಡಿನಲ್ಲಿ ಹುಟ್ಟಿರುವುದು ನಮ್ಮ ಸೌಭಾಗ್ಯ. ವಿದ್ಯಾರ್ಥಿಗಳೆಲ್ಲರೂ ಅವರ ಸಾಧನಾ ಪಥದಲ್ಲಿ ಸಾಗಬೇಕು ಎಂದು ಕರೆ ನೀಡಿದರು.

ಸಮ್ಮೇಳನದಲ್ಲಿ "ಅಮೂರ್ತ" ಎಂಬ ಪುಸ್ತಕ ಬಿಡುಗಡೆ ಮಾಡಲಾಯಿತು. ಕವಿವಿ ಗಣಿತ ವಿಭಾಗದ ವಿಶ್ರಾಂತ ಪ್ರಾಧ್ಯಾಪಕ ಡಾ. ಬಿ. ಬಸವನಗೌಡ ಅವರನ್ನು ಸನ್ಮಾನಿಸಲಾಯಿತು. ಕರ್ನಾಟಕ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಕೆ.ಬಿ. ಗುಡಸಿ, ವಿಶ್ರಾಂತ ಕುಲಪತಿ ಡಾ. ಎಚ್.ಬಿ. ವಾಲಿಕಾರ ಮುಖ್ಯ ಅತಿಥಿಯಾಗಿ ಆಗಮಿಸಿದ್ದರು.

ಡಾ. ಆರ್ಯಕುಮಾರ ಚಾಂದ್ ಮಾತನಾಡಿದರು. ಪ್ರೊ ಎನ್.ಬಿ. ನಡುವಿನಮನಿ, ಡಾ. ಜಿ. ಹರಿಹರನ್, ಡಾ. ವೀರಣ್ಣ ಡಿ. ಬೋಳಿಶೆಟ್ಟಿ ಮಾತನಾಡಿದರು. ಪ್ರೊ ಎಸ್.ಸಿ. ಶಿರಾಳಶೆಟ್ಟಿ, ಅಧ್ಯಕ್ಷತೆ ವಹಿಸಿದ್ದರು. ಕವಿವಿ ಹಣಕಾಸು ಅಧಿಕಾರಿ ಡಾ. ಸಿ. ಕೃಷ್ಣಮೂರ್ತಿ, ಪ್ರೊ. ರಾಮಾಣಿ, ಡಾ. ಪಿ.ಜಿ. ಪಾಟೀಲ್ ಉಪಸ್ಥಿತರಿದ್ದರು. ಡಾ. ಪಿ.ಜಿ. ಪಾಟೀಲ್ ಸ್ವಾಗತಿಸಿದರು. ಸಾನಿಯಾ ಜಿದ್ದಿ ಮತ್ತು ಸ್ವಾತಿ ನಿರೂಪಿಸಿದರು. ಡಾ. ಆರ್. ಎಸ್. ದ್ಯಾವನಾಳ ವಂದಿಸಿದರು.


ಧಾರವಾಡದ ಪ್ರಾದೇಶಿಕ ವಿಜ್ಞಾನ ಕೇಂದ್ರದಲ್ಲಿ ಗಣಿತ ವಿಶ್ಲೇಷಣೆ ಕುರಿತ ಅಂತಾರಾಷ್ಟ್ರೀಯ ಸಮ್ಮೇಳನವನ್ನು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಉದ್ಘಾಟಿಸಿದರು.

## 4ರಿಂದ ಗಣಕಯಂತ್ರ ಪರೀಕ್ಷೆ

**ಹುಬ್ಬಳ್ಳಿ:** ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿ ವತಿಯಿಂದ ಧಾರವಾಡ ನಗರದಲ್ಲಿ ಆ. 4 ರಿಂದ 7 ರವರೆಗೆ ಗಣಕಯಂತ್ರ ಪರೀಕ್ಷೆಗಳನ್ನು ನಡೆಸಲಾಗುತ್ತಿರುವ ಹಿನ್ನೆಲೆಯಲ್ಲಿ ಪರೀಕ್ಷಾ ಕೇಂದ್ರದ ಸುತ್ತಮುತ್ತ ನಿಷೇಧಿತ ಪ್ರದೇಶವೆಂದು ಘೋಷಣೆ ಮಾಡಿ ಆದೇಶ ಹೊರಡಿಸಲಾಗಿದೆ.

ನಾಲ್ಕು ದಿನಗಳ ಕಾಲ ಬೆಳಗ್ಗೆ 10.30 ರಿಂದ 12.30 ಹಾಗೂ ಮಧ್ಯಾಹ್ನ 2.30 ರಿಂದ 4.30 ರವರೆಗೆ ಧಾರವಾಡ ನಗರದ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆಯ ಪರೀಕ್ಷಾ ಕೇಂದ್ರದಲ್ಲಿ ಪರೀಕ್ಷೆ ನಡೆಯಲಿದ್ದು, 200 ಮೀಟರ್ ಪ್ರದೇಶದಲ್ಲಿ ನಿಷೇಧ ಹೊರಡಿಸಿದ್ದು, ಯಾವುದೇ ಝರಾಕ್ಸ್, ಪ್ರಿಂಟಿಂಗ್, ಸ್ಕ್ಯಾನಿಂಗ್, ಕಂಪ್ಯೂಟರ್ ಸೆಂಟರ್‌ಗಳನ್ನು ತೆರೆಯದಂತೆ ಪೊಲೀಸ್ ಪ್ರಕಟಣೆ ತಿಳಿಸಿದೆ.